# ಅಸಂಖ್ಯ ಪ್ರಮಥರ ಗಣಮೇಳ ಕಾರ್ಯಕ್ರಮ ಆಹ್ವಾನ ಪತ್ರಿಕೆ ಬಿಡುಗಡೆ

ಚಿತ್ರದುರ್ಗ : 12ನೇ ಶತಮಾನದಲ್ಲಿ ಬಸವಣ್ಣನವರ ನೇತೃತ್ವದಲ್ಲಿ ಲಕ್ಷದ ಮೇಲೆ ತೊಂಬತ್ತಾರು ಸಾವಿರ ಗಣಂಗಳು ಸಮಾವೇಶಗೊಂಡಿದ್ದರೆಂಬುದು ಒಂದು ಇತಿಹಾಸ. 21ನೇ ಶತಮಾನದಲ್ಲಿ ಅಂತಹ ಒಂದು ಚಾರಿತ್ರಿಕ ಘಟನೆಗೆ ಸಾಕ್ಷಿ ಆಗಬೇಕೆಂಬ ಉದ್ದೇಶದಿಂದ 2020ನೇ ಸಾಲಿನ ಫೆಬ್ರವರಿ ತಿಂಗಳ 16ನೇ ತಾರೀಕು ಭಾನುವಾರ ಬೃಹತ್ತಾದ ಅಸಂಖ್ಯ ಪ್ರಮಥರ ಗಣಮೇಳವನ್ನು ಆಯೋಜಿಸಲಾಗಿದೆ ಎಂದು ಡಾ. ಶಿವಮೂರ್ತಿ ಮುರುಘಾ ಶರಣರು ಹೇಳಿದರು.





ಶ್ರೀಮಠದ ಅಲ್ಲಮಪ್ರಭು ಸಂಶೋಧನಾ ಕೇಂದ್ರದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಅಸಂಖ್ಯ ಪ್ರಮಥರ ಗಣಮೇಳ ಕಾರ್ಯಕ್ರಮ ಆಹ್ವಾನ ಪತ್ರಿಕೆ ಬಿಡುಗಡೆಗೊಳಿಸಿ ಶರಣರು ಮಾಹಿತಿ ನೀಡಿದರು.

ರಾಜ್ಯದ ರಾಜಧಾನಿ ಬೆಂಗಳೂರಿನಲ್ಲಿ ಬರುವ ಭಾನುವಾರ ನಡೆಯಲಿರುವ ಈ ಕಾರ್ಯಕ್ರಮ ಐತಿಹಾಸಿಕ ಕಾರ್ಯಕ್ರಮ. ಇದೊಂದು ದಾಖಲೆಯ ಪುಟಗಳನ್ನು ಸೇರುವ ಕಾರ್ಯಕ್ರಮವಾಗಿದೆ. ಎಲ್ಲ ಕಡೆಗಳಿಂದಲೂ ಜನರು ಅತ್ಯಂತ ಖುಷಿಯಿಂದ ಆಗಮಿಸುತ್ತಿದ್ದಾರೆ. ನಾವು ಹಲವಾರು ಸಂಘಟನೆಗಳನ್ನು ನೋಡುತ್ತೇವೆ. ಆದರೆ ಇದು ಜಾತಿ ಆಧಾರಿತ ಸಮಾವೇಶವಲ್ಲ, ರಾಜಕೀಯ ಪ್ರೇರಿತ ಅಲ್ಲ. ಇದೊಂದು ಸಿದ್ಧಾಂತ ಮತ್ತು ತತ್ತ್ವ ಆಧಾರಿತ ಸಮ್ಮೇಳನ. ಅಲಕ್ಷಿತರನ್ನು, ಅಬಲರನ್ನು, ಮಹಿಳೆಯರನ್ನು ಅನುಭವ ಮಂಟಪಕ್ಕೆ ಕರೆತಂದು ಎಲ್ಲರಿಗೂ ಘನತೆ ಗೌರವ ತಂದುಕೊಟ್ಟರು ಬಸವಣ್ಣ. 12ನೇ ಶತಮಾನದಲ್ಲಿ ಪ್ರಥಮ ಅಸಂಖ್ಯ ಪ್ರಮಥ ಗಣಮೇಳ ನಡೆಯಿತು. ಈಗ 21ನೇ ಶತಮಾನದ 2ನೇ ಅಸಂಖ್ಯ ಪ್ರಮಥರ ಗಣಮೇಳ ನಡೆಯುತ್ತಿದೆ ಎಂದರು.

ಸಮ್ಮೇಳನದಲ್ಲಿ ಜಾಗತಿಕ ಶಾಂತಿ ಮತ್ತು ಪ್ರಗತಿ ಕುರಿತು ಗಮನಸೆಳೆಯಲಾಗುವುದು. ಸುಮಾರು 2000ಕ್ಕು ಹೆಚ್ಚು ಕಾರ್ಯಕರ್ತರು ಅವಿರತವಾಗಿ ಶ್ರಮಿಸುತ್ತಿದ್ದಾರೆ. ಚಿತ್ರದುರ್ಗ ಜಿಲ್ಲೆಯಿಂದ ಕನಿಷ್ಠ 500 ಬಸ್‌ಗಳಲ್ಲಿ ಜನರು ಬರುವ ನಿರೀಕ್ಷೆಯಿದೆ. ಬೆಂಗಳೂರಿನ ರೈತ ಸಂಘಟನೆಗಳು, ದಲಿತ ಸಂಘಟನೆಗಳು ಸೇರಿದಂತೆ ಹತ್ತಾರು ಸ್ಥಳೀಯ ಸಂಘಟನೆಗಳು ಸಂಪೂರ್ಣ ಸಹಕಾರ ನೀಡುತ್ತಿವೆ ಎಂದು ನುಡಿದರು.

ಪತ್ರಿಕಾ ಗೋಷ್ಠಿಯಲ್ಲಿ ಫಾದರ್ ರಾಜು, ಜಿ.ಪಂ. ಮಾಜಿ ಅಧ್ಯಕ್ಷ ಮೀಸೆ ಮಹಲಿಂಗಪ್ಪ, ಎಲ್.ಬಿ. ರಾಜಶೇಖರ್, ಪಟೇಲ್ ಶಿವಕುಮಾರ್, ಕೆಇಬಿ ಷಣ್ಮುಖಪ್ಪ, ರಾಜಶೇಖರ್, ಪೈಲ್ವಾನ್ ತಿಪ್ಪೇಸ್ವಾಮಿ, ಎಸ್‌ಜೆಎಂ ವಿದ್ಯಾಪೀಠದ ಕಾರ್ಯದರ್ಶಿ ಎ.ಜೆ.ಪರಮಶಿವಯ್ಯ ಮುಂತಾದವರಿದ್ದರು.

<<< >>>